ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.**

ಸಂಖ್ಯೆ:ಸಿ5[1] ಮ.ದಿ 16/2015-16 ದಿನಾಂಕ: 06-03-2017

**ಜ್ಞಾಪನ**

ವಿಷಯ: ಸಾರ್ವಜನಿಕ ಶಿಕ್ಷಣ ಇಲಾಖಾ ನೌಕರರ ಸಂಘದ ವತಿಯಿಂದ ದಿನಾಂಕ:18-03-2017 ರಂದು ರಾಜ್ಯ ಮಟ್ಟದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರು, ಕರ್ನಾಟಕ ರಾಜ್ಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಲಿಪಿಕ ನೌಕರರ ವಾಹನ ಚಾಲಕರ ಮತ್ತು ಗ್ರೂಪ್ ಡಿ ನೌಕರರ ಸಂಘ[ರಿ] ಇವರ ಪತ್ರ ದಿನಾಂಕ:04-03-2017

****

ಉಲ್ಲೇಖಿತ ಪತ್ರದಲ್ಲಿ ಕೋರಿರುವಂತೆ ಕರ್ನಾಟಕ ರಾಜ್ಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಲಿಪಿಕ ನೌಕರರ, ವಾಹನ ಚಾಲಕರ ಮತ್ತು ಗ್ರೂಪ್ ಡಿ ನೌಕರರ ಸಂಘದ ವತಿಯಿಂದ ದಿನಾಂಕ: 18.03.2017ರ ಶನಿವಾರ ರಾಜ್ಯ ಮಟ್ಟದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ನೌಕರರ ರಾಜ್ಯ ಮಟ್ಟದ ಸಮ್ಮೇಳನವನ್ನು St Joseph Auditorium, St Joseph Indian Institutions, Gate No.5, next to Malya Hospital, No.23, Vittal Malya road, Bengaluru ಇಲ್ಲಿ ನಡೆಸಲು ಉದ್ದೇಶಿಸಿದ್ದು, ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ಸಾರ್ವಜನಿಕ ಶಿಕ್ಷಣ ಇಲಾಖೆಯ ನೌಕರರಿಗೆ ಸದರಿ ದಿನದಂದು ಓ.ಓ.ಡಿ ಸೌಲಭ್ಯವನ್ನು ನೀಡಲು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ದಿನಾಂಕ:18.03.2017ರಂದು ರಾಜ್ಯ ಮಟ್ಟದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ನೌಕರರ ರಾಜ್ಯ ಮಟ್ಟದ ಸಮ್ಮೇಳದಲ್ಲಿ ಭಾಗವಹಿಸುವ ನೌಕರರಿಗೆ ಮಾತ್ರ ಹಾಜರಾತಿ ಪ್ರಮಾಣ ಪತ್ರವನ್ನು ಹಾಜರುಪಡಿಸುವ ಷರತ್ತಿಗೊಳಪಟ್ಟು ಅನ್ಯ ಕಾರ್ಯ ನಿಮಿತ್ತ (ಓ.ಓ.ಡಿ)ಎಂದು ಪರಿಗಣಿಸಲು ಅನುಮತಿ ನೀಡಿದೆ.

[ಮಾನ್ಯ ಆಯುಕ್ತರ ಆದೇಶದ ಮೇರೆಗೆ]

[ಎಸ್.ಕಾತ್ಯಾಯನಿ ದೇವಿ]
ಜಂಟಿ ನಿರ್ದೇಶಕರು[ಆಡಳಿತ]

ಇವರಿಗೆ:

1. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರ್ಗಿ.
3. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಪ್ರೌಢ ಶಿಕ್ಷಣ, ಡಿ.ಎಸ್.ಇ.ಆರ್.ಟಿ, ಕ.ಪ್ರೌ.ಶಿ.ಪರೀಕ್ಷಾ ಮಂಡಳಿ, ಮೈನಾರಿಟಿ, ಬೆಂಗಳೂರು.
4. ರಾಜ್ಯದ ಎಲ್ಲಾ ಜಂಟಿ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
5. ರಾಜ್ಯದ ಎಲ್ಲಾ ಸಿ.ಟಿ.ಇ ಪ್ರಾಂಶುಪಾಲರು, ಸಾರ್ವಜನಿಕ ಶಿಕ್ಷಣ ಇಲಾಖೆ.
6. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಹಾಗೂ (ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ.
7. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ.
8. ಮಾನ್ಯ ಆಯುಕ್ತರ ಆಪ್ತ ಶಾಖೆಗೆ.
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಲಿಪಿಕ ನೌಕರರ ವಾಹನ ಚಾಲಕರ ಮತ್ತು ಗ್ರೂಪ್ ಡಿ ನೌಕರರ ಸಂಘ[ರಿ].
10. ಕಛೇರಿ ಪ್ರತಿ.